## 13. ಆಂಧ್ರಪ್ರದೇಶಕ್ಕೆ ಮೂರು ರಾಜಧಾನಿ ಪ್ರಸ್ತಾವನೆಗೆ ಒಪ್ಪಿಗೆ

ಆಂಧ್ರಪ್ರದೇಶದಲ್ಲಿ 3 ರಾಜಧಾನಿ ಹೊಂದುವ ವಿಧೇಯಕಕ್ಕೆ ರಾಜ್ಯಪಾಲರು ವಿಶ್ವಭೂಷಣ್ ಹರಿಚಂದ ಅನುಮೋದನೆ ನೀಡಿದ್ದಾರೆ. 3 ರಾಜಧಾನಿಗಳನ್ನು ಹೊಂದಬೇಕು ಎಂದು ಪಟ್ಟು ಹಿಡಿದಿದ್ದ ಮುಖ್ಯಮಂತ್ರಿ ಜಗನ್ ಮೋಹನ್ ರೆಡ್ಡಿ ಹಲವು ವಿರೋಧಗಳ ನಡುವೆಯೂ ತಮ್ಮ ಯೋಜನೆಯನ್ನು ಕಾರ್ಯಗತಗೊಳಿಸಿದ್ದಾರೆ. ಕಾರ್ಯಾಂಗ ರಾಜಧಾನಿಯಾಗಿ ವಿಶಾಖಪಟ್ಟಣ, ಶಾಸಕಾಂಗ ರಾಜಧಾನಿಯಾಗಿ ಅಮರಾವತಿ, ನ್ಯಾಯಾಂಗ ರಾಜಧಾನಿಯಾಗಿ ಕರ್ನೂಲು ಆಯ್ಕೆಯಾಗಿದೆ. ಈ ಮೂಲಕ, ಭಾರತದಲ್ಲಿ 3 ರಾಜಧಾನಿಗಳನ್ನು ಹೊಂದಿರುವ ಏಕೈಕ ರಾಜ್ಯವಾಗಿ ಆಂಧ್ರ ಹೊರಹೊಮ್ಮಿದೆ.

**ಅಮರಾವತಿ ಬದಲಾವಣೆ ಏಕೆ:** ತೆಲಂಗಾಣದಿಂದ ಪ್ರತ್ಯೇಕಗೊಂಡ ಆಂಧ್ರ ಪ್ರದೇಶಕ್ಕೆ ಅಮರಾವತಿಯೇ ರಾಜಧಾನಿ ಎಂದು ಬಹುತೇಕವಾಗಿ ನಿರ್ಧಾರವಾಗಿತ್ತು. ಅಂದು ಮುಖ್ಯಮಂತ್ರಿಯಾಗಿದ್ದ ಚಂದ್ರಬಾಬು ನಾಯ್ಡು ಅಮರಾವತಿಯನ್ನು 'ಗ್ರೀನ್ ಕ್ಯಾಪಿಟಲ್' ಮಾಡಲು 30 ಸಾವಿರಕ್ಕೂ ಅಧಿಕ ಎಕರೆ ಜಮೀನನ್ನು ಖರೀದಿಸಲು ರೈತರೊಂದಿಗೆ ಒಪ್ಪಂದ ಮಾಡಿಕೊಂಡಿದ್ದರು. ನೆರವನ್ನೂ ಪಡೆಯಲಾಗಿತ್ತು. ಇನ್ನೇನು ಅಂತಿಮ ಹಂತ ತಲುಪಬೇಕು ಎನ್ನುವಷ್ಟರಲ್ಲಿ ಚಂದ್ರಬಾಬು ನಾಯ್ಡು ಅಧಿಕಾರ ಕಳೆದುಕೊಂಡರು. ನೂತನ ಸಿಎಂ ಜಗನ್ ಮೋಹನ್ ರೆಡ್ಡಿ ಅಮರಾವತಿ ರಾಜಧಾನಿ ಯೋಜನೆ ರದ್ದು ಪಡಿಸಿ, ಮೂರು ರಾಜಧಾನಿಗಳ ಪ್ರಸ್ತಾಪ ಮಾಡಿದರು.

**ವಿಶಾಖಪಟ್ಟಣ:** ಕಾರ್ಯಾಂಗ ರಾಜಧಾನಿಯಾಗಿರುವ ವಿಶಾಖಪಟ್ಟಣದಲ್ಲಿ ಮುಖ್ಯಮಂತ್ರಿ ಹಾಗೂ ರಾಜ್ಯಪಾಲರ ಕಚೇರಿಗಳು ಇರಲಿವೆ. ಅಮರಾವತಿಯಿಂದ ವಿವಿಧ ಸಚಿವಾಲಯಗಳು, ಇಲಾಖೆಗಳ ಕಚೇರಿಗಳು ವಿಶಾಖ ಪಟ್ಟಣಕ್ಕೆ ಸ್ಥಳಾಂತರವಾಗಲಿದೆ.

**ಅಮರಾವತಿ:** ಶಾಸಕಾಂಗ ರಾಜಧಾನಿಯಾಗಿರುವ ಅಮರಾವತಿಯಲ್ಲಿ ಈಗಾಗಲೇ ಸಹಸ್ರಾರು ಕೋಟಿ ರೂ. ವ್ಯಯಿಸಿ ಕಟ್ಟಡಗಳನ್ನು ನಿರ್ಮಿಸಲಾಗಿದೆ. ಈ ನಗರದಲ್ಲಿ ವಿಧಾನಸಭಾ ಕಲಾಪಗಳು ನಡೆಯಲಿವೆ.

**ಕರ್ನೂಲು:** ನ್ಯಾಯಾಂಗ ರಾಜಧಾನಿಯಾಗಿರುವ ಕರ್ನೂಲಿಗೆ ಹೈಕೋರ್ಟ್ ಸ್ಥಳಾಂತರಗೊಳ್ಳಲಿದೆ. ಹೈಕೋರ್ಟ್ ಹಾಗೂ ನ್ಯಾಯಾಂಗಕ್ಕೆ ಸಂಬಂಧಿಸಿದ ಕಚೇರಿಗಳು ಈ ನಗರದಲ್ಲಿ ಇರಲಿವೆ.

ಆಧಾರ:ಉದಯವಾಣಿ, ದಿನಾಂಕ:02.08.2020